ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡಪ್ರಭ    ದಿನಾಂಕ : DATE : 11/07/2019

# ಇನ್ನಿಬ್ಬರು ಶಾಸಕರ ರಾಜೀನಾಮೆ: ಸರ್ಕಾರದ ಬಲ 101ಕ್ಕೆ ಕುಸಿತ

11/7/19

## ರಾಜೀನಾಮೆ ಸಂಖ್ಯೆ 16ಕ್ಕೆ ಏರಿಕೆ | ಇಂದು ಇನ್ನಷ್ಟು ರಾಜೀನಾಮೆ?

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕಾಂಗ್ರೆಸ್ ಪಕ್ಷದ ಸಚಿವ ಎಂ.ಟಿ.ಬಿ.ನಾಗರಾಜ್ ಮತ್ತು ಶಾಸಕ ಡಾ.ಕೆ.ಸುಧಾಕರ್ ಅವರು ಬುಧವಾರ ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುವುದರೊಂದಿಗೆ ಈವರೆಗೆ ರಾಜೀನಾಮೆ ಸಲ್ಲಿಸಿರುವ ಅತೃಪ್ತರ ಸಂಖ್ಯೆ 16ಕ್ಕೆ ಏರಿದ್ದು, ಸಮ್ಮಿಶ್ರ ಸರ್ಕಾರದ ಬಲ 101ಕ್ಕೆ ಕುಸಿದಂತಾಗಿದೆ.





ಇದೇ ವೇಳೆ ಗುರುವಾರ ಇನ್ನಷ್ಟು ಶಾಸಕರು ರಾಜೀನಾಮೆ ನೀಡಬಹುದು ಎಂಬ ದಟ್ಟ ವದಂತಿ ಹಬ್ಬಿದ್ದು, ಸಮ್ಮಿಶ್ರ ಸರ್ಕಾರದ ಬಲ 100ರ ಗಡಿಗಿಂತಲೂ ಕೆಳಗಿಳಿಯುವ ಸಾಧ್ಯತೆಯನ್ನು ಅಲ್ಲಗಳೆಯುವಂತಿಲ್ಲ ಎನ್ನಲಾಗಿದೆ.

ಸ್ಪೀಕರ್ ಸೇರಿದಂತೆ ಪ್ರಸ್ತುತ 119 ಸದಸ್ಯರ ಬಲ ಹೊಂದಿರುವ ಮೈತ್ರಿ ಸರ್ಕಾರಕ್ಕೆ ಬೆಂಬಲ ನೀಡಿದ್ದ ಇಬ್ಬರು ಪಕ್ಷೇತರ ಶಾಸಕರು ಬೆಂಬಲ ವಾಪಸ್ ಪಡೆದಿರುವುದರಿಂದ ಪಕ್ಷದ ಬಲ 117ಕ್ಕೆ ಇಳಿದಿದೆ. ಕಾಂಗ್ರೆಸ್ ಪಕ್ಷದ 13 ಸದಸ್ಯರು ಹಾಗೂ ಜೆಡಿಎಸ್ ಪಕ್ಷದ ಮೂವರು ಶಾಸಕರು ನೀಡಿರುವ ರಾಜೀನಾಮೆ ಅಧಿಕೃತವಾಗಿ ಅಂಗೀಕಾರವಾದರೆ ಮೈತ್ರಿ ಸರ್ಕಾರದ ಬಲ 101ಕ್ಕೆ ಕುಸಿಯಲಿದೆ. ಆಗ ವಿಧಾನಸಭೆಯ ಸದಸ್ಯರ ಒಟ್ಟು ಸಂಖ್ಯೆ 208ಕ್ಕೆ ಇಳಿಯುವುದರಿಂದ ಸರ್ಕಾರ ರಚನೆಗೆ 105 ಸದಸ್ಯರು ಸಾಕು. ಅಂದರೆ, ಮ್ಯಾಜಿಕ್ ನಂಬರ್ 105.

ಇಬ್ಬರು ಪಕ್ಷೇತರರು ಬಿಜೆಪಿಯನ್ನು ಬೆಂಬಲಿಸಿರುವುದರಿಂದ ಪ್ರಸ್ತುತ ಬಿಜೆಪಿ ಬಲ 107ಕ್ಕೇರಿದೆ. ಅವರ ಶಾಸಕರ ರಾಜೀನಾಮೆ ಅಂಗೀಕಾರವಾದರೆ ಮಾತ್ರ ಬಿಜೆಪಿ ಸರ್ಕಾರ ರಚನೆಯ ಹಾದಿ ಸುಗಮವಾಗಲಿದೆ. ಮತದಾನದ ವೇಳೆ ಆಡಳಿತ ಮತ್ತು ವಿಪಕ್ಷಗಳಿಗೆ ಸಮನಾಗಿ ಮತಗಳು ಬಂದಾಗ ಮಾತ್ರ ಸಭಾಧ್ಯಕ್ಷರು ತಮ್ಮ ವಿವೇಚನೆಗೆ ಅನುಗುಣವಾಗಿ ಮತ ಚಲಾಯಿಸುತ್ತಾರೆ. ಸಾಮಾನ್ಯವಾಗಿ ಸಭಾಧ್ಯಕ್ಷರು ಆಡಳಿತ ಪಕ್ಷದ ಪರವಾಗಿ ಮತ ಹಾಕುತ್ತಾರೆ.